# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – 570 006.

ಆಡಳಿತ ವಿಭಾಗ

ಸಂಖ್ಯೆ:ಕರಾಮುವಿ/ಆವಿ/ಜಿಎಲ್–2/ಇತರೆ/2024–25. ದಿನಾಂಕ: 17–12–2024

## ಸುತ್ತೋಲೆ

**ವಿಷಯ:** ಕಡತಗಳನ್ನು ನಿಗಧಿತ ಕಾಲಮಿತಿಯೊಳಗೆ ನಿರ್ವಹಿಸುವ ಕುರಿತು.

**ಉಲ್ಲೇಖ:** 1. ಟಿಪ್ಪಣಿ ಸಂಖ್ಯೆ: ಕರಾಮುವಿ/ಆರ್‌ಪಿಎ/ಇತರೆ/2024–25. ದಿ:12.12.2024.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 13.12.2024.

* * * * *

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದಲ್ಲಿ ಹಲವಾರು ವಿಭಾಗಗಳಿದ್ದು, ಸದರಿ ವಿಭಾಗಗಳಿಂದ ಕಡತಗಳನ್ನು ಮುಂದಿನ ಪ್ರಕ್ರಿಯೆಗಾಗಿ ಕುಲಸಚಿವರ ಹಾಗೂ ಮಾನ್ಯ ಕುಲಪತಿಗಳ ಆಪ್ತಶಾಖೆಗೆ ಕಳುಹಿಸುತ್ತಿದ್ದು, ಈ ಪೈಕಿ ಕೆಲವು ವಿಭಾಗಗಳು ಮಾತ್ರ ಕಡತಗಳನ್ನು ಸಮರ್ಪಕವಾಗಿ ನಿರ್ವಹಿಸಿ, ನಿಗಧಿತ ಅವಧಿಯೊಳಗೆ ಸಲ್ಲಿಸುತ್ತಿವೆ. ಆದರೆ ಇನ್ನೂ ಕೆಲವು ವಿಭಾಗಗಳಿಂದ ಕಡತಗಳ ನಿರ್ವಹಣೆಯಲ್ಲಿ ಸಣ್ಣ–ಪುಟ್ಟ ದೋಷಗಳ ಜೊತೆಗೆ, ಕಡತಗಳನ್ನು ಬಹಳ ವಿಳಂಬವಾಗಿ ಕಳುಹಿಸುತ್ತಿರುವುದು ಕಂಡುಬರುತ್ತಿದೆ. ಇದರಿಂದಾಗಿ, ನಿಗಧಿತ ಅವಧಿಯೊಳಗೆ ನಿರ್ವಹಿಸಲ್ಪಡಬೇಕಾದ ಕೆಲಸ– ಕಾರ್ಯಗಳಲ್ಲಿ ವಿಳಂಬವಾಗುತ್ತಿದ್ದು. ಕುಲಸಚಿವರ ಹಾಗೂ ಮಾನ್ಯ ಕುಲಪತಿಗಳ ಆಪ್ತಶಾಖೆಗೆ ಕಳುಹಿಸಬೇಕಾದ ಕಡತಗಳನ್ನು, ಆಯಾ ವಿಭಾಗದ ಅಧಿಕಾರಿ/ ಸಿಬ್ಬಂದಿಯಿಂದ 07 (Within Seven Working Days) ಕೆಲಸದ ದಿವಸಗಳೊಳಗೆ ಕಡತಗಳು ಮುಂದಿನ ಪ್ರಕ್ರಿಯೆ ಸಂಬಂಧ ನಿಮ್ಮ ವಿಭಾಗದಿಂದ ಕುಲಸಚಿವರ ಹಾಗೂ ಮಾನ್ಯ ಕುಲಪತಿಗಳ ಆಪ್ತ ಶಾಖೆಗೆ ಬಾರದೇ ಇದ್ದ ಪಕ್ಷದಲ್ಲಿ ಸಂಬಂಧಪಟ್ಟ ವಿಭಾಗದ ಅಧಿಕಾರಿ/ಸಿಬ್ಬಂದಿಯನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಹಾಗೂ ಅಗತ್ಯವೆಂದು ಕಂಡುಬಂದಲ್ಲಿ, ಈ ಸಂಬಂಧ, ಅಂತಹ ಅಧಿಕಾರಿ/ಸಿಬ್ಬಂದಿ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವ

ಗೆ,

ವಿ.ವಿ. ನಿಲಯದ ಎಲ್ಲಾ ಬೋಧಕ ಮತ್ತು ಬೋಧಕೇತರ ನೌಕರರು, ಕರಾಮುವಿ, ಮೈಸೂರು.

ಪ್ರತಿ,

1. ಎಲ್ಲಾ ಶಾಸನಬದ್ಧ ಅಧಿಕಾರಿಗಳು, ಕರಾಮುವಿ, ಮೈಸೂರು.
2. ಡೀನ್ (ಅಧ್ಯಯನ ಕೇಂದ್ರಗಳು), ಕರಾಮುವಿ, ಮೈಸೂರು.
3. ಮಾನ್ಯ ಕುಲಪತಿಗಳ ಆಪ್ತಶಾಖೆ, ಕರಾಮುವಿ, ಮೈಸೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ಕರಾಮುವಿ, ಮೈಸೂರು.
5. ಡಾ. ನವೀನ್ ಕುಮಾರ್.ಸಿ.ಜಿ, ನೋಡಲ್ ಆಫೀಸರ್, ವೆಬ್‌ಸೈಟ್, ಕರಾಮುವಿ, ಮೈಸೂರು, ಈ ಪ್ರಕಟಣೆಯನ್ನು ವಿವಿ ನಿಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
6. ಕಛೇರಿ ಪ್ರತಿ.